ಪರಿಶಿಷ್ಟ ಜಾತಿ: ಪಂಗಡದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನೀಡುವಿಕೆಯಲ್ಲಿ ಆಗುತ್ತಿರುವ ತೊಂದರೆ.

2404(2120)

ಶ್ರೀ ಅಂಗಾರ ಎಸ್.(ಸೂಳ್ಯ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿ ವಾಸಿಸುತ್ತಿರುವ ತಮಿಳು ಕಾರ್ಮಿಕರಲ್ಲಿ ಅನೇಕ ಕುಟುಂಬಗಳು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಕ್ಕೆ ಸೇರಿದ ವರ್ಗಗಳಿದ್ದು ವಿದ್ಯಾಭ್ಯಾಸ ಮಾಡುವರೇ ಜಾತಿ ಪ್ರಮಾಣ ಪತ್ರ ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದರೆ ಕ್ರಮ ಕೈಗೊಳ್ಳಲಾಗಿದೆಯೆ?

ಆ) ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿ ಅನೇಕ ತಮಿಳು ಕಾರ್ಮಿಕ ಕುಟುಂಬಗಳಿದ್ದು ಸ್ವಂತ ನಿವೇಶನ ಇಲ್ಲದೆ ಇರುವುದರಿಂದ ನಿವೇಶನ ಒದಗಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಇ) ಹಾಗಿದ್ದಲ್ಲಿ ಎಂದು ಒದಗಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ(ಸಮಾಜ ಕಲ್ಯಾಣ ಸಚಿವರು):

ಅ) ಇಲ್ಲ.

ಆ) ತಮಿಳು ಕಾರ್ಮಿಕ ಕುಟುಂಬದವರಿಗೆ ಈಗಾಗಲೇ ನಿವೇಶನಗಳನ್ನು ನೀಡಲಾಗಿದೆ.

ಇ) ''ಅ'' ನಲ್ಲಿ ಉತ್ತರಿಸಲಾಗಿದೆ.

ಸುಳ್ಯದಲ್ಲಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು.

2405(3104)

ಶ್ರೀ ಅಂಗಾರ.ಎಸ್.(ಸೂಳ್ಯ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್